ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 434 |
| ಸದಸ್ಯರ ಹೆಸರು | ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 12/12/2018 |
| ಉತ್ತರಿಸುವ ಸಚಿವರು | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ, ಐ.ಟಿ & ಬಿ.ಟಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಬೆಳಗಾವಿ ಜಿಲ್ಲೆ ರಾಯಬಾಗ್ ತಾಲ್ಲೂಕಿನ ಬೆಕ್ಕೇರಿ ಗ್ರಾಮದಲ್ಲಿರುವ ಭಾಗ್ಯಶ್ರೀ ಲಗಮವ್ವ ಶುಗರ್ಸ್ ಪ್ರೈ ಲಿ., ಖಂಡಸಾರಿ ಸಕ್ಕರೆ ಕಾರ್ಖಾನೆಯು ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ: ಅನುಮತಿ ಪಡೆದಿದ್ದಲ್ಲಿ, ಮಾಹಿತಿ ಒದಗಿಸುವುದು; (ಅನುಮತಿ ಪಡೆದ ವರ್ಷ, ಕಾರ್ಖಾನೆ ಪ್ರಾರಂಭವಾದ ವರ್ಷ ಮತ್ತು ದಿನಾಂಕದ ಬಗ್ಗೆ ಸರ್ಕಾರದ ಆದೇಶವಿದ್ದಲ್ಲಿ ಒದಗಿಸುವುದು) | ಬೆಳಗಾವಿ ಜಿಲ್ಲೆ ರಾಯಬಾಗ್ ತಾಲ್ಲೂಕಿನ ಬೆಕ್ಕೇರಿ ಗ್ರಾಮದಲ್ಲಿರುವ ಭಾಗ್ಯಶ್ರೀ ಲಗಮವ್ವ ಶುಗರ್ಸ್ ಪ್ರೈ ಲಿ., ಖಂಡಸಾರಿ ಸಕ್ಕರೆ ಕಾರ್ಖಾನೆಯು ಸರ್ಕಾರದಿಂದ ಯಾವುದೇ ಅನುಮತಿ ಪಡೆದಿರುವುದಿಲ್ಲ.<br><br>ಮೆ॥ ಭಾಗ್ಯಶ್ರೀ ಲಗಮವ್ವಾ ಶುಗರ್ಸ್ ಪ್ರೈ ಲಿ; ರವರು ಅಳಗವಾಡಿ ಗ್ರಾಮ, ರಾಯಬಾಗ್ ತಾಲ್ಲೂಕು, ಬೆಳಗಾಂ ಜಿಲ್ಲೆ, ಈ ಸ್ಥಳದಲ್ಲಿ ಹೊಸ ಸಕ್ಕರೆ ಕಾರ್ಖಾನೆಯ ಸ್ಥಾಪನೆಗಾಗಿ ಅಂತರ ಪ್ರಮಾಣ ಪತ್ರ ನೀಡುವಂತೆ ಕೋರಿ ದಿನಾಂಕ 16.1.2015ರಂದು ಅರ್ಜಿ ಸಲ್ಲಿಸಿರುತ್ತಾರೆ. ಆದರೆ ಸದರಿ ಸ್ಥಳದಲ್ಲಿ ಈಗಾಗಲೇ ಮೆ॥ಅಳಗವಾಡಿ ಬೀರೇಶ್ವರ ಸಕ್ಕರೆ ಕಾರ್ಖಾನೆಯವರು ಸಕ್ಕರೆ ಕಾರ್ಖಾನೆಯ ಸ್ಥಾಪನೆಗಾಗಿ ಕೇಂದ್ರ ಸರ್ಕಾರದಿಂದ ಐ.ಇ.ಎಂ ಪಡೆದಿರುವುದರಿಂದ ಅದೇ ಸ್ಥಳದಲ್ಲಿ ಮತ್ತೊಂದು ಸಕ್ಕರೆ ಕಾರ್ಖಾನೆಯ ಸ್ಥಾಪನೆಗಾಗಿ ಅರ್ಜಿಯನ್ನು ಪರಿಗಣಿಸಲು ಸಾಧ್ಯವಾಗುವುದಿಲ್ಲವೆಂದು ಸೂಚಿಸಿ ಮೆ॥ ಭಾಗ್ಯಶ್ರೀ ಲಗಮವ್ವಾ ಶುಗರ್ಸ್ ಪ್ರೈ ಲಿ; ಬೆಕ್ಕೇರಿ ರವರಿಗೆ ಹಿಂಬರಹವನ್ನು ದಿನಾಂಕ 6.3.2015ರಂದು ನೀಡಲಾಗಿರುವುದರಿಂದ ಸರ್ಕಾರದಿಂದ ಮುಂದಿನ ಯಾವುದೇ ಅನುಮತಿ ಪಡೆಯಲು ಅವಕಾಶವಿರುವುದಿಲ್ಲ. |
| ಆ | ಸದರಿ ಕಾರ್ಖಾನೆಯು ಸರ್ಕಾರದ ಅನುಮತಿ ಪಡೆಯದೇ ಇದ್ದಲ್ಲಿ ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮವೇನು? | ಸದರಿ ಕಾರ್ಖಾನೆಯ ಅರ್ಜಿಯನ್ನು ಪರಿಗಣಿಸದಿದ್ದುದರಿಂದ ಸರ್ಕಾರದಿಂದ ಯಾವುದೇ ಅನುಮತಿ ಪಡೆಯಲು ಅವಕಾಶವಿರುವುದಿಲ್ಲ. |

ಸಂಖ್ಯೆ: ಸಿಐ 111 ಎಸ್‌ಜಿಎಫ್ 2018

(ಕೆ.ಜೆ. ಜಾರ್ಜ್)
ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ,
ಸಕ್ಕರೆ, ಐಟಿ & ಬಿಟಿ ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು